ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 17-04-2017

# ಪತ್ರಿಕಾ ಆಮಂತ್ರಣ

**1.** ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ರಾಷ್ಟ್ರೀಯ ಸೇವಾ ಯೋಜನಾ ಕೋಶ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗದಲ್ಲಿ ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್ ರವರ 126ನೇ ಜನ್ಮ ದಿನಾಚರಣೆ:

ಮುಖ್ಯ ಅತಿಥಿಗಳು:

ಗೌರವಾನ್ವಿತ ಜಸ್ಟಿಸ್ ಶ್ರೀ ಬಿಲ್ಲಪ್ಪ ಎಚ್.
ವಿಶ್ರಾಂತ ನ್ಯಾಯಧೀಶರು, ರಾಜ್ಯ ಉಚ್ಚನ್ಯಾಯಲಯ, ಕರ್ನಾಟಕ

ಗೌರವಾನ್ವಿತ ಪ್ರೊ. ರವಿವರ್ಮ ಕುಮಾರ್,
ವಿಶ್ರಾಂತ ಅಡ್ವಕೇಟ್ ಜನರಲ್, ಕರ್ನಾಟಕ ಸರ್ಕಾರ ಮತ್ತು ಹಿರಿಯ ನ್ಯಾಯವಾದಿಗಳು.

ಅಧ್ಯಕ್ಷತೆ:

ಡಾ. ಕೆ.ಎಸ್. ರವೀಂದ್ರನಾಥ್, ಗೌರವಾನ್ವಿತ ಕುಲಪತಿಗಳು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಕರ್ನಾಟಕ.

ದಿನಾಂಕ: 18-04-2017, ಮಂಗಳವಾರ, ಸಮಯ: ಬೆಳಿಗ್ಗೆ 11.00 ಗಂಟೆಗೆ

ಸ್ಥಳ: ಧನ್ವಂತರಿ ಸಭಾಂಗಣ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಜಯನಗರ ಟಿ ಬ್ಲಾಕ್, ಬೆಂಗಳೂರು.

## 2. “Save Water – Save Bengaluru” Campaign:

**Inauguration:**

**P.G.R. Sindhia, State Chief Commissioner,**

**Date: 18-04-02017 Tuesday, at 12.00 Noon.**

**Place : B.B.M.P. Junior College, Opp. Idga Maidana, Chmarajapet, Bengaluru – 560 018.**

**ಪತ್ರಿಕಾ ಪ್ರಕಟಣೆ**

# ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ವತಿಯಿಂದ ನೀರಿನ ಕುರಿತು ಜನಜಾಗೃತಿ ಶಿಬಿರ

ಬೆಂಗಳೂರು, ಏಪ್ರಿಲ್ 17 (ಕರ್ನಾಟಕ ವಾರ್ತೆ)

ನೀರಿನ ಬಗ್ಗೆ ಜನಜಾಗೃತಿಯನ್ನು ಉಂಟುಮಾಡಲು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ವತಿಯಿಂದ “ವಿಶ್ವ ಜಲ ದಿನದ ಅಂಗವಾಗಿ “ನೀರು ಉಳಿಸಿ – ಬೆಂಗಳೂರು ಉಳಿಸಿ” ಎಂಬ ಘೋಷ ಬೆಂಗಳೂರಿನಾದ್ಯಂತ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.

ಈ ಅಭಿಯಾನ ನಾಳೆ ಚಾಮರಾಜಪೇಟೆಯ ಬಿ.ಬಿ.ಎಂ.ಪಿ. ಜೂನಿಯರ್ ಕಾಲೇಜಿನಲ್ಲಿ 18–4–17 ರ ಮಧ್ಯಾಹ್ನ 12 ಗಂಟೆಗೆ ಬಿ.ಬಿ.ಎಂ.ಪಿ. ಜೂನಿಯರ್ ಕಾಲೇಜ್ ಈದ್ಗಾ ಮೈದಾನ ಮುಂಬಾಗ, ಚಾಮರಾಜಪೇಟೆ, ಬೆಂಗಳೂರು –18 ಇಲ್ಲಿ ಹಮ್ಮಿಕೊಳ್ಳಲಾಗಿದೆ. ಇದರ ಉದ್ಘಾಟನೆಯನ್ನು ಭಾರತ್ ಸ್ಕಾಟ್ ಮತ್ತು ಗೈಡ್ಸ್‌ನ ರಾಜ್ಯ ಮುಖ್ಯ ಆಯುಕ್ತ ಪಿ.ಜಿ.ಆರ್. ಸಿಂಧ್ಯಾ ಉದ್ಘಾಟಿಸಲಿದ್ದಾರೆ.

ಸ್ಕೌಟ್ಸ್ ಮತ್ತು ಗೈಡ್ಸ್‌ನ ಪ್ರತಿನಿಧಿಗಳು ಆ ವ್ಯಾಪ್ತಿಯ ಮನೆ ಮನೆಗಳಿಗೆ ಭೇಟಿಕೊಟ್ಟು ನೀರಿನ ಮಿತ ಬಳಕೆಯ ಬಗ್ಗೆ ಸಾರ್ವಜನಿಕರಿಗೆ ಮನದಟ್ಟು ಮಾಡಿಕೊಡಲಿದ್ದಾರೆ. ಸದರಿ

ಕಾರ್ಯಕ್ರಮದಲ್ಲಿ ಸೇರಿದಂತೆ ಬಿ.ಬಿ.ಎಂ.ಪಿ. ಸದಸ್ಯರು ಮತ್ತು ಅಧಿಕಾರಿಗಳು ಭಾಗವಹಿಸಲಿದ್ದಾರೆ.

ಕೆಎನ್‍ಕೆ:ಜಿಪಿಆರ್

# ‘ಸುರಕ್ಷಿತ ನಗರವೇ ಸ್ಮಾರ್ಟ್ ನಗರ’ ಕಾರ್ಯಾಗಾರ

ಬೆಂಗಳೂರು, ಏಪ್ರಿಲ್ 17 (ಕರ್ನಾಟಕ ವಾರ್ತೆ)

ಮೂಲಭೂತ ಸೌಕರ್ಯ ಅಭಿವೃದ್ಧಿ ಹಾಗೂ ಮಹಿಳೆಯರ ಸುರಕ್ಷತೆಗೆ ಆದ್ಯತೆ ನೀಡಿದರೆ ಯಾವುದೇ ನಗರವನ್ನು ಸ್ಮಾರ್ಟ್ ಸಿಟಿಯನ್ನಾಗಿ ಮಾಡಬಹುದು ಎಂದು ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಸುಭಾಷ್ ಚಂದ್ರ ಕುಂಟಿಯಾ ಅವರು ತಿಳಿಸಿದರು.

ಅವರು ಇಂದು ಹೋಟೆಲ್ ಏಟ್ರಿಯಾದಲ್ಲಿ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗ ಹಾಗೂ ಹನ್ಸ್ ಸೇಡೆಲ್ ಫೌಂಡೇಶನ್ ಸಹಯೋಗದಲ್ಲಿ ಇಂದು ಹಮ್ಮಿಕೊಳ್ಳಲಾಗಿದ್ದ ‘ಸುರಕ್ಷಿತ ನಗರವೇ ಸ್ಮಾರ್ಟ್ ನಗರ’ ಕುರಿತ ಎರಡು ದಿನಗಳ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ನಾವು ನಗರವನ್ನು ಸ್ಮಾರ್ಟ್ ಸಿಟಿಯನ್ನಾಗಿಸಲು ಎಲ್ಲಾ ವಲಯಗಳಲ್ಲೂ ಪ್ರಯತ್ನಿಸಬೇಕು. ಸರ್ಕಾರವು ಮಹಿಳಾ ಸುರಕ್ಷತೆಗಾಗಿ ‘ಸುರಕ್ಷಾ’ ಎಂಬ ಮೊಬೈಲ್ ಆ್ಯಪ್‍ಅನ್ನು ಪರಿಚಯಿಸಿದ್ದು, ಸಂಕಷ್ಟಕ್ಕೆ ಸಿಲುಕಿದ ಮಹಿಳೆ ಈ ಆ್ಯಪ್‍ನ್ ಬಟನ್ ಒತ್ತಿದೊಡನೆ ಗುಲಾಬಿ ಬಣ್ಣದ ಹೊಯ್ಸಳ ವಾಹನ ಆಕೆಯ ರಕ್ಷಣೆಗೆ 10 ನಿಮಿಷದೊಳಗೆ ಬರುತ್ತದೆ. ರಾಜ್ಯದಲ್ಲಿನ ಒಟ್ಟು ಜನಸಂಖ್ಯೆಯಲ್ಲಿ ಸುಮಾರು ಅರ್ಧದಷ್ಟು ಇರುವ ಮಹಿಳಾ ಜನಸಂಖ್ಯೆಗೆ ಪೂರಕವಾಗಿ ಅವರಿಗೆ ಎಲ್ಲಾ ವಿಧದ ರಕ್ಷಣೆ, ಸೌಕರ್ಯ ಒದಗಿಸಲು ಸರ್ಕಾರ ಬದ್ಧವಾಗಿದೆ. ಮಹಿಳಾ ಪೊಲೀಸ್ ಠಾಣೆಗಳನ್ನು ತೆರೆಯಲಾಗಿದೆ. ಪೊಲೀಸ್ ಹಾಗೂ ನ್ಯಾಯಾಂಗ ವ್ಯವಸ್ಥೆಯ ಸಹಾಯದಿಂದ ಪ್ರಕರಣಗಳನ್ನು ಇತ್ಯರ್ಥ ಮಾಡಲಾಗುತ್ತದೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಹ ಮಹಿಳೆಯ ಸಬಲೀಕರಣ, ರಕ್ಷಣೆಗೆ ಕೈಗೊಳ್ಳಬೇಕಾದ ವರದಿಯನ್ನು ತಯಾರಿಸಿ ನೀಡಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರಾದ ಮೀರಾ ಸಕ್ಸೇನಾ ಮಾಡನಾಡಿ, ಆಯೋಗವು ಸಾರ್ವಜನಿಕರ, ಮಹಿಳೆಯರ ಹಕ್ಕುಗಳ ರಕ್ಷಣೆಗೆ ಹೋರಾಡುತ್ತಿವೆ. ಸಂವಿಧಾನದಲ್ಲಿರುವ ಮೂಲಕಭೂತ ಹಕ್ಕುಗಳ ಹಾಗೂ ಎಲ್ಲರೂ ನ್ಯಾಯ ಒದಗಿಸುತ್ತದೆ. ಆಹಾಖು ಸುರಕ್ಷತೆ, ವಸತಿ, ಶಿಕ್ಷಣದಿಂದ ಹಾಗೂ ರಾಜ್ಯದ ನೀತಿ ನಿರ್ದೇಶಕ ತತ್ವಗಳು ಮನುಷ್ಯನ ಜೀವನಮಟ್ಟವನ್ನು ಸುಧಾರಿಸುತ್ತಿದೆ ಆದರೆ ಸಮಾಜದಲ್ಲಿ ವರದಕ್ಷಿಣೆ, ಜೀತಪದ್ಧತಿ, ಅತ್ಯಾಚರ, ಮಾನವ ಕಳ್ಳ ಸಾಗಾಣೆಗಳು ಅಸ್ಥಿತ್ವದಲ್ಲಿದೆ. ಸರ್ಕಾರವು ಮಹಿಳೆ, ಮಕ್ಕಳು , ಅಂಗವಿಕಲರು, ಹಿರಿಯ ನಾಗರೀಕರು ಹಾಗೂ ಮಂಗಳಮುಖಿಯರ ಬಗೆಗೆ ಹೆಚ್ಚಿನ ಕಾಳಜಿ ಹಾಗೂ ಸೌಕರ್ಯ ನೀಡಬೇಕಾಗಿರುವುದು ಇಂದಿನ ಅಗತ್ಯವಾಗಿದೆ. ಇದಕ್ಕೆ ಯೋಜನೆಗಳನ್ನು ರೂಪಿಸಿ ಅದನ್ನು ಜಾರಿಗೊಳಿಸಬೇಕಿದೆ ಎಂದವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಹಾಗೂ ಕೇರಳದ ಜರ್ಮನ್ ಕನ್ಸೋಲ್ ಜನರಲ್ ಮಾರ್ಗಿಟ್ ಹೆಲ್ವಿಂಗ್ ಮಾತನಾಡಿ ಇಂದಿನ ಮಹಿಳೆಯರ ಪ್ರತಿಷ್ಠಿತ ಸ್ಥಾನಮಾನಗಳನ್ನು ಅಲಂಕರಿಸಿದ್ದಾರೆ. ಮಹಿಳೆಯರ ಮೇಲಿನ ಅಪರಾಧಗಳು ಇಂದೂ ವರದಿಗೊಳ್ಳುತ್ತಿವೆ. ಅವಳಿಗೆ ರಕ್ಷಣೆ ಒದಗಿಸುವುದು ಬಹುಮುಖ್ಯ. ಹೆಚ್ಚು ಮಹಿಳಾ ಠಾಣೆಗಳನ್ನು ತೆರೆಯಬೇಕಿದೆ. ಮಹಿಳೆಯರಿಗೆ ವಿದ್ಯಾಭ್ಯಾಸ ಆತ್ಮಸ್ಥೈರ್ಯ ಒದಗಿಸಬೇಕಿದೆ. ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರು ತಿಳಿಸಿರುವಂತೆ ಸಮಾಜದ ಏಳ್ಗೆಯು ಮಹಿಳೆಯರ ಸಬಲೀಕರಣದ ಮೇಲೆ ನಿಂತಿದೆ. ಆಕೆ ಮುಂದುವರೆಯದಿದ್ದರೆ ಸಮಾಜವೂ ಮುಂದುವರೆಯುವುದಿಲ್ಲ ಎಂದಿದ್ದಾರೆ. ಆದ್ದರಿಂದ ಮಹಿಳೆಯರು ಶಕ್ತಿವಂತರಾಗಬೇಕೆಂದರು.

ಕಾರ್ಯಕ್ರಮದಲ್ಲಿ ಪೊಲೀಸ್ ಇಲಾಖೆ ಹೆಚ್ಚುವರಿ ಆಯುಕ್ತರಾದ ಎಸ್. ರವಿ ಅವರು ಮಾತನಾಡಿ ಅಪರಾಧ ತಡೆಗೆ ಸಾರ್ವಜನಿಕರ ಸಹಕಾರ ಬಹುಮುಖ್ಯ ನಗರದಲ್ಲಿ 259 ಹೊಯ್ಸಳ ವಾಹನಗಳನ್ನು ಕಾವಲಿಗಾಗಿ ಒದಗಿಸಲಾಗಿದೆ. ಸುರಕ್ಷಾ ಆ್ಯಪ್‌ಅನ್ನು ಮಹಿಳೆಯರ ರಕ್ಷಣೆಗೆ ನೀಡಲಾಗಿದೆ. ಅಲ್ಲದೆ ಪ್ರಮುಖ ಸ್ಥಳಗಳಲ್ಲಿ ಸುಮಾರು 300 ಸಿಸಿಟಿವಿಗಳನ್ನು ನೀಡಲಾಗಿದೆ. ಮಾನವ ಕಳ್ಳಸಾಗಾಣಿ, ಸೈಬರ್ ಅಪರಾಧಗಳಿಗೆ ಹೆಚ್ಚು ಒತ್ತು ನೀಡಿ ಪ್ರಕರಣ ಬೇಧಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಆಹಾರ ಸುರಕ್ಷತೆ, ಶಾಲಾ ಮಕ್ಕಳ ಸುರಕ್ಷತೆ, ಬಾಲಕಾರ್ಮಿಕ ಪದ್ದತಿ, ಕಾನೂನಿನ ಅಡಿಯಲ್ಲಿ ನ್ಯಾಯ ಇತರ ವಿಷಯಗಳ ಕುರಿತು ವಿವಿಧ ಅಧಿಕಾರಿಗಲೂ, ಸಂಪನ್ಮೂಲ ವ್ಯಕ್ತಿಗಳು ವಿಷಯ ಮಂಡನೆ ಮಾಡಿದರು,.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿ ಉಮಾ ಮಹದೇವನ್, ಕರ್ನಾಟಕ ಮಾನವ ಹಕ್ಕುಗಳ ಆಯೋಗದ ಕಾರ್ಯದರ್ಶಿ ಮಧು ಶರ್ಮಾ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಕೆಎನ್‌ಕೆ:ಜಿಪಿಆರ್

## ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್ ರವರ 126ನೇ ಜನ್ಮ ದಿನಾಚರಣೆ

ಬೆಂಗಳೂರು, ಏಪ್ರಿಲ್ 17 (ಕರ್ನಾಟಕ ವಾರ್ತೆ)

**ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ರಾಷ್ಟ್ರೀಯ ಸೇವಾ ಯೋಜನಾ ಕೋಶ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗದಲ್ಲಿ ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್‌ರವರ 126ನೇ ಜನ್ಮ ದಿನಾಚರಣೆಯನ್ನು ಏಪ್ರಿಲ್ 18 ರಂದು ಬೆಳಿಗ್ಗೆ 11.00 ಗಂಟೆಗೆ ನಗರದ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಧನ್ವಂತರಿ ಸಭಾಂಗಣ, 4ನೇ "ಟ" ಬ್ಲಾಕ್, ಜಯನಗರ, ಬೆಂಗಳೂರು ಇಲ್ಲಿ ಹಮ್ಮಿಕೊಳ್ಳಲಾಗಿದೆ.**

**ಈ ಸಮಾರಂಭದಲ್ಲಿ ಗೌರವಾನ್ವಿತ ಜಸ್ಟಿಸ್ ಶ್ರೀ ಬಿಲ್ಲಪ್ಪ ಎಚ್. ವಿಶ್ರಾಂತ ನ್ಯಾಯಧೀಶರು, ರಾಜ್ಯ ಉಚ್ಚನ್ಯಾಯಲಯ, ಹಾಗೂ ಗೌರವಾನ್ವಿತ ಪ್ರೊ. ರವಿವರ್ಮ ಕುಮಾರ್, ವಿಶ್ರಾಂತ ಅಡ್ವಕೇಟ್ ಜನರಲ್, ಮತ್ತು ಹಿರಿಯ ನ್ಯಾಯವಾದಿಗಳು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.**

**ಡಾ. ಕೆ. ಎಸ್. ರವೀಂದ್ರನಾಥ್, ಗೌರವಾನ್ವಿತ ಕುಲಪತಿಗಳು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಇವರು ಸಮಾರಂಭದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.**

ಕೆಎನ್‌ಕೆ:ಜಿಪಿಆರ್

## ವಾಣಿಜ್ಯ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯಕ್ಕಾಗಿ ನೋಂದಣಿ ಸಂಖ್ಯೆ ಕಡ್ಡಾಯ

ಬೆಂಗಳೂರು, ಏಪ್ರಿಲ್ 17 (ಕರ್ನಾಟಕ ವಾರ್ತೆ)

**ಮಂಡಳಿ ವತಿಯಿಂದ ನಡೆಸಲಾಗುವ ವಾಣಿಜ್ಯ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯಕ್ಕಾಗಿ ವಾಣಿಜ್ಯ ಸಂಸ್ಥೆಗಳಲ್ಲಿನ ಬೋಧಕರ ನೋಂದಣಿ ಸಂಖ್ಯೆ ಕಡ್ಡಾಯಗೊಳಿಸಲಾಗಿರುತ್ತದೆ.**

**ನೋಂದಣಿಗಾಗಿ ನಿಗದಿತ ನಮೂನೆಯಲ್ಲಿ ರೂ. 200/- ಗಳನ್ನು ನೆಫ್ಟ್ ಚಲನ್ ಮೂಲಕ ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ಪಾವತಿಸಿ ಚಲನ್ ಹಾಗೂ ವಿದ್ಯಾರ್ಹತೆಯ ಪ್ರತಿಯೊಂದಿಗೆ ಸಲ್ಲಿಸಬೇಕು.**

**ನೆಫ್ಟ್ ಚಲನ್ ಮೂಲಕ ಶುಲ್ಕ ಪಾವತಿಸಲು ಅಂತಿಮ ದಿನಾಂಕ: 25-04-2017 ಹಾಗೂ ಮಂಡಳಿಗೆ ಅರ್ಜಿಯನ್ನು ಸಲ್ಲಿಸಲು ಅಂತಿಮ ದಿನಾಂಕ: 24-04-2017 ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

ಕೆಎನ್‌ಕೆ:ಜಿಪಿಆರ್

## ಅರ್ಹ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆ

ಬೆಂಗಳೂರು, ಏಪ್ರಿಲ್ 17 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಕೈಮಗ್ಗ ಮತ್ತು ಜವಳಿ ಇಲಾಖೆಯಲ್ಲಿನ ಸಹಾಯಕ ನಿರ್ದೇಶಕರು ಮತ್ತು ಜವಳಿ ಪ್ರವರ್ಧನಾಧಿಕಾರಿ ಹುದ್ದೆಗಳಿಗೆ ಅರ್ಹರಾದ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆಯನ್ನು ಏಪ್ರಿಲ್ 22 ರಂದು ಬೆಳಿಗ್ಗೆ 9.30 ಗಂಟೆಗೆ ಆಯೋಗದ ಕೇಂದ್ರ ಕಚೇರಿ, ಬೆಂಗಳೂರು ಇಲ್ಲಿ ನಡೆಸಲಿದೆ.

ಅರ್ಹ ಅಭ್ಯರ್ಥಿಗಳ ಅರ್ಹತಾ ಪಟ್ಟಿಯನ್ನು ಆಯೋಗದ ವೆಬ್‌ಸೈಟ್ "http://kpsc.kar.nic.in" ರಲ್ಲಿ ಪ್ರಕಟಿಸಲಾಗಿದೆ. ಅಭ್ಯರ್ಥಿಗಳು ಸೂಚನಾ ಪತ್ರಗಳನ್ನು ಆಯೋಗದ ಅಂತರ್ಜಾಲದಿಂದ ಏಪ್ರಿಲ್ 13 ರಿಂದ ಡೌನ್‌ಲೋಡ್ ಮಾಡಿಕೊಳ್ಳುವಂತೆಯು ಹಾಗೂ ಸೂಚನಾಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಲು ತಾಂತ್ರಿಕ ಸಮಸ್ಯೆಗಳು ಉಂಟಾದಲ್ಲಿ Help Line ಸಂಖ್ಯೆ 7337830894 ಅನ್ನು

ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ಲೋಕ ಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಕೆಎನ್‌ಕೆ:ಜಿಪಿಆರ್

# ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಹೆಚ್ಚುವರಿ ಪೀಠ

ಬೆಂಗಳೂರು, ಏಪ್ರಿಲ್ 17 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿ ಇತ್ಯರ್ಥಕ್ಕಾಗಿ ಬಾಕಿಯಿರುವ ಮತ್ತು ದಿನನಿತ್ಯ ಸಲ್ಲಿಸಬಹುದಾದ ಪ್ರಕರಣಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸುವ ಉದ್ದೇಶದಿಂದ ಗ್ರಾಹಕ ಸಂರಕ್ಷಣೆ ಕಾಯ್ದೆಯಡಿ ಪ್ರದತ್ತವಾದ ಅಧಿಕಾರದಡಿಯಲ್ಲಿ ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಹೆಚ್ಚುವರಿ ಪೀಠವನ್ನು ರಚಿಸಿದೆ.

ಹೆಚ್ಚುವರಿ ಪೀಠವು ರಾಜ್ಯ ಆಯೋಗದ ನ್ಯಾಯಾಂಗ ಸದಸ್ಯ ಬಸವರಾಜ ಶಿವಪ್ಪ ತಡಹಾಳ್ ಇವರ ನೇತೃತ್ವದಲ್ಲಿ ಸದಸ್ಯೆ ಶ್ರೀಮತಿ ಜಿ.ಟಿ ವಿಜಯಲಕ್ಷ್ಮಿ ಇವರನ್ನು ಒಳಗೊಂಡಂತೆ ಕಾರ್ಯನಿರ್ವಹಿಸಲಿದೆ.

ರಾಜ್ಯ ಆಯೋಗದ ಮೂಲಪೀಠದ ಅಧ್ಯಕ್ಷ ನ್ಯಾಯಮೂರ್ತಿ ಬಿ.ಎಸ್. ಇಂದ್ರಕಲಾ, ಇವರ ನೇತೃತ್ವದಲ್ಲಿ ಕಾರ್ಯನಿರ್ವಹಿಸಲಿದೆ.

ರಾಜ್ಯದ ಆಯೋಗದ ಮೂಲ ಪೀಠ ಮತ್ತು ಹೆಚ್ಚುವರಿ ಪೀಠದ ಸುಗಮ ಕಾರ್ಯನಿರ್ವಹಣೆಗೆ ಅನುಕೂಲವಾಗುವಂತೆ ಪ್ರಕರಣಗಳ, ಸಿಬ್ಬಂದಿಗಳ, ಮತ್ತಿತರ ವ್ಯವಸ್ಥೆ ಮಾಡಲು ರಾಜ್ಯ ಆಯೋಗದ ರಿಜಿಸ್ಟ್ರಾರ್ ಮತ್ತು ಆಡಳಿತಾಧಿಕಾರಿಗಳು ತುರ್ತು ಕ್ರಮವಹಿಸುವಂತೆ ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೆಎನ್‌ಕೆ:ಜಿಪಿಆರ್

## ಅರ್ಹ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆ

ಬೆಂಗಳೂರು, ಏಪ್ರಿಲ್ 17 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಕೈಮಗ್ಗ ಮತ್ತು ಜವಳಿ ತನಿಖಾಧಿಕಾರಿ, ಕರ್ನಾಟಕ ಗೃಹ ಮಂಡಳಿಯಲ್ಲಿನ ಕಿರಿಯ ಅಭಿಯಂತರರು ಮತ್ತು ಪೌರಾಡಳಿತ ನಿರ್ದೇಶಾನಾಲಯದಲ್ಲಿನ ನಗರ ಸಭೆ/ಪುರಸಭೆ ಕಿರಿಯ ಅಭಿಯಂತರರ ಹುದ್ದೆಗಳಿಗೆ ಅರ್ಹರಾದ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆಯನ್ನು ಏಪ್ರಿಲ್ 25 ರಂದು ಬೆಳಿಗ್ಗೆ 9.30 ಗಂಟೆಗೆ ಆಯೋಗದ ಕೇಂದ್ರ ಕಚೇರಿ, ಬೆಂಗಳೂರು ಇಲ್ಲಿ ನಡೆಸಲಿದೆ.

ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ. ಸೂಚನಾ ಪತ್ರವನ್ನು ತಮ್ಮ ನೋಂದಣಿ ಸಂಖ್ಯೆ ಮತ್ತು ಜನ್ಮ ದಿನಾಂಕವನ್ನು ನಮೂದಿಸಿ ಆಯೋಗದ ಅಂತರ್ಜಾಲ "http://kpsc.kar.nic.in" ಯಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 7337830894 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ಲೋಕ ಸೇವಾ ಆಯೋಗದ ಪ್ರಕಟಣೆ ತಿಳಿಸಿದೆ

ಕೆಎನ್‌ಕೆ:ಜಿಪಿಆರ್

## ರಿಜಿಸ್ಟ್ರಾರ್ ಹುದ್ದೆಗೆ ಕಾರ್ಯವರದಿ ಮಾಡಿಕೊಳ್ಳುವಂತೆ ಸೂಚನೆ

ಬೆಂಗಳೂರು, ಏಪ್ರಿಲ್ 17 (ಕರ್ನಾಟಕ ವಾರ್ತೆ)

ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಸೇವೆಗೆ ಸೇರಿದ ಡಾ. ಕೆ. ಜಿ. ಚಂದ್ರಶೇಖರ್, ಪ್ರಾಂಶುಪಾಲರು, ಸರ್ಕಾರಿ ಎಸ್.ಕೆ.ಎಸ್.ಜೆ.ಟಿ. ಸಂಸ್ಥೆ, ಕೆ.ಆರ್. ಸರ್ಕಲ್, ಬೆಂಗಳೂರು ಇವರನ್ನು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಮೈಸೂರು ಇಲ್ಲಿನ ರಿಜಿಸ್ಟ್ರಾರ್ ಹುದ್ದೆಯಿಂದ ಕಾರ್ಯವಿಮುಕ್ತಿಗೊಳಿಸಲಾಗಿದೆ.

ಡಾ. ಕೆ.ಜಿ. ಚಂದ್ರಶೇಖರ್, ಪ್ರಾಂಶುಪಾಲರು, ಸರ್ಕಾರಿ ಎಸ್.ಕೆ.ಎಸ್.ಜೆ.ಟಿ. ಸಂಸ್ಥೆ, ಕೆ.ಆರ್. ಸರ್ಕಲ್, ಬೆಂಗಳೂರು ಇವರು ಕಾರ್ಯವಿಮುಕ್ತಿಗೊಂಡು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು ಇಲ್ಲಿನ ರಿಜಿಸ್ಟ್ರಾರ್ ಹುದ್ದೆಗೆ ನಿಯೋಜನೆ ಮೇರೆಗೆ

ಕಾರ್ಯವರದಿ ಮಾಡಿಕೊಳ್ಳುವಂತೆ ಸೂಚಿಸಿ ಉನ್ನತ ಶಿಕ್ಷಣ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೆಎನ್‌ಕೆ:ಜಿಪಿಆರ್

## "ಸಂಕ್ಷಿಪ್ತ ಕಲಿಕಾ ಸೂಚಕಗಳು"
## ಸಾರ್ವಜನಿಕರಿಂದ ಸೂಕ್ತ ಸಲಹೆ ಸೂಚನೆಗೆ ಆಹ್ವಾನ

ಬೆಂಗಳೂರು, ಏಪ್ರಿಲ್ 17 (ಕರ್ನಾಟಕ ವಾರ್ತೆ)

ಪೋಷಕರು ತಮ್ಮ ಮಕ್ಕಳು ಆಯಾ ತರಗತಿಯಲ್ಲಿ ವಿವಿಧ ವಿಷಯಗಳಲ್ಲಿ ಕಲಿಯಬೇಕಾದ ಪ್ರಮುಖ ಅಂಶಗಳನ್ನು ತಿಳಿದುಕೊಳ್ಳುವ ಸಲುವಾಗಿ 1 ರಿಂದ 5 ನೇ ತರಗತಿಯವರೆಗೆ ಎನ್.ಸಿ.ಇ.ಆರ್.ಟಿ. ಕಲಿಕಾ ಫಲಿತಗಳು ಹಾಗೂ ರಾಜ್ಯ ಪಠ್ಯಕ್ರಮವನ್ನು ಗಮನದಲ್ಲಿಟ್ಟುಕೊಂಡು ತರಗತಿವಾರು, ವಿಷಯವಾರು "ಸಂಕ್ಷಿಪ್ತ ಕಲಿಕಾ ಸೂಚಕಗಳನ್ನು" ಸಿದ್ಧಪಡಿಸಲಾಗಿದೆ.

ಇವುಗಳ ಮಾಹಿತಿ www.dsert.kar.nic.in ವೆಬ್‌ಸೈಟ್‌ನಲ್ಲಿ ಲಭ್ಯವಿದ್ದು, ಇವುಗಳ ಬಗ್ಗೆ ಶಿಕ್ಷಣಾಸಕ್ತರು/ಪೋಷಕರು/ಸಾರ್ವಜನಿಕರು ಸೂಕ್ತ ಸಲಹೆ ಸೂಚನೆಗಳಿದ್ದಲ್ಲಿ seeu.dsert-ka@kar.nic.in ಅಥವಾ ನಿರ್ದೇಶಕರು ಡಿ.ಎಸ್.ಇ.ಆರ್.ಟಿ. ನಂ 4, 100 ಅಡಿ ರಿಂಗ್ ರೋಡ್, ಬನಶಂಕರಿ, 3ನೇ ಹಂತ, ಬೆಂಗಳೂರು – 85 ಇವರಿಗೆ ದಿನಾಂಕ: 20–04–2017 ರೊಳಗೆ ಒದಗಿಸಲು ಕೋರಿದೆ.

## "Parent-facing Learning Indicators"

Bangalore, April 17 (Karnataka Information)

Class wise, subject wise "Parent-facing Learning Indicators" for class I to 5 based on NCERT learning outcomes and state curriculum have been prepared by the department for the parents to understand the learning levels. The draft copy of these indicators is available in

the website www.dsert.kar.nic.in. The Educationist/Parents/Public are requested to provide suitable suggestion through email address seeu.dsert-ka@kar.nic.in or post to the Direction, DSERT, No. 4, 100 feet Ring road, Banashankari 3rd Stage, Bangalore -85 on or before 20-04-2017.

## ಶ್ರೀ ಎಂ.ಎನ್. ಪಿಳ್ಳಪ್ಪ ಅವರಿಗೆ ಕರ್ನಾಟಕ ಸರ್ಕಾರ ಕೆಂಪೇಗೌಡ ಪ್ರಶಸ್ತಿ ಪ್ರಧಾನ

ಬೆಂಗಳೂರು, ಏಪ್ರಿಲ್ 17 (ಕರ್ನಾಟಕ ವಾರ್ತೆ)

ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದಲ್ಲಿ ಸೇವೆ ಸಲ್ಲಿಸುತ್ತಿರುವ ಶ್ರೀ ಎಂ.ಎನ್. ಪಿಳ್ಳಪ್ಪ, ಇವರ ಸೇವೆಯನ್ನು ಗುರುತಿಸಿ ಕರ್ನಾಟಕ ಸರ್ಕಾರ ಕೆಂಪೇಗೌಡ ಪ್ರಶಸ್ತಿ ನೀಡಿ ಗೌರವಿಸಿದೆ.

ನವದೆಹಲಿಯಲ್ಲಿ ರಾಷ್ಟ್ರೀಯ ಕೆಂಪೇಗೌಡ ಉತ್ಸವದಲ್ಲಿ ರಾಷ್ಟ್ರಪತಿಗಳು ಹಾಗೂ ಮಾಜಿ ಪ್ರಧಾನಮಂತ್ರಿಗಳು ಹಾಗೂ ಕೇಂದ್ರ ಸಚಿವರು ಭಾಗವಹಿಸಿದ್ದ ಕಾರ್ಯಕ್ರಮದಲ್ಲಿ ಇವರನ್ನು ಸನ್ಮಾನಿಸಲಾಯಿತು.